**ದಿನಾಂಕ:24.06.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ: ವಾದಿ ಪರ ಶ್ರೀ. ಯು.ಎಸ್., ವಕೀಲರಿಂದ:-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ ತಿಳಿದುಕೊಂಡಿರುತ್ತೇನೆ. ಅದರಲ್ಲಿರುವ ಸಹಿ ನನ್ನದಾಗಿರುತ್ತದೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ನಾನು ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಸರ್ವೆ ನಂ. 70/8 ಪಿ6 ರ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಸರ್ವೆ ನಂ. 70/8 ಪಿ5 ರ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ದಾವಾ ಆಸ್ತಿಗೆ ಸಂಬಂಧಿಸಿದ ಎರಡು ಪುಟಗಳ ಮ್ಯುಟೇಷನ್ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಅಸಲು ದಾವಾ ಸಂಖ್ಯೆ:40/2018 ರ ವಾದಪತ್ರದ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಅಸಲು ದಾವಾ ಸಂಖ್ಯೆ:40/2018 ರ ಪ್ರತಿವಾದಪತ್ರದ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಅಸಲು ದಾವಾ ಸಂಖ್ಯೆ:40/2018 ರ ಆದೇಶ ಪುಟಗಳ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಅಸಲು ದಾವಾ ಸಂಖ್ಯೆ:40/2018 ರ ವಾದಿಗಳು ಹಾಜರು ಪಡಿಸಿರುವ ವಂಶವೃಕ್ಷದ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಈ ದಾವೆಯ ವಾದಿಯು ದಿನಾಂಕಃ 11.12.2023 ರಂದು ನನ್ನ ಹೆಸರಿಗೆ ಬರೆದಿರುವ ಅಧಿಕಾರ ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗಾಗಿ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಒ,

sd/-
ಮೂರನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು ಕಡೂರು.